## ಡಾ. ಕೆ. ಕಸ್ತೂರಿರಂಗನ್ ವರದಿ

# ಆಕ್ಷೇಪಣೆ ಸಲ್ಲಿಸಲು ಸೂಚನೆ



ಕಾರವಾರ, ನ.19: ಪಶ್ಚಿಮ ಘಟ್ಟಗಳ ಸಂರಕ್ಷಣೆ ಕುರಿತಾಗಿ ಡಾ.ಕೆ.ಕಸ್ತೂರಿ ರಂಗನ್ ಸಮಿತಿ ನೀಡಿರುವ ಶಿಫಾರಸುಗಳಿಗೆ ಜಿಲ್ಲಾ ಮಟ್ಟದಲ್ಲಿ ಆಕ್ಷೇಪಣೆ, ಸಲಹೆಗಳಿದ್ದಲ್ಲಿ ಅವುಗಳನ್ನು ಸಂಗ್ರಹಿಸಿ ವರದಿಯನ್ನು ಸಲ್ಲಿಸಬೇಕು ಎಂದು ಕರ್ನಾಟಕ ರಾಜ್ಯ ಜೀವವೈವಿಧ್ಯ ಮಂಡಳಿ ಅಧ್ಯಕ್ಷ ಆರ್.ಎಂ.ಎನ್.ಸಹಾಯ್ ಅವರು ಸೂಚನೆ ನೀಡಿದರು.

ಇಂದು ವೀಡಿಯೊ ಕಾನ್ಫರೆನ್ಸ್‌ನಲ್ಲಿ ಎಲ್ಲಾ ಜಿಲ್ಲೆಗಳ ಅಧಿಕಾರಿಗಳಿಗೆ ಈ ಕುರಿತು ಅವರು ಸೂಚನೆಗಳನ್ನು ನೀಡಿದರು.

ಕಸ್ತೂರಿ ರಂಗನ್ ವರದಿಯಲ್ಲಿ ಮಾರ್ಪಾಡು ಮಾಡಲು ಶಿಫಾರಸುಗಳನ್ನು ಮಾಡಲು ರಾಜ್ಯಮಟ್ಟದಲ್ಲಿ ಉನ್ನತ ಮಟ್ಟದ ಸಮಿತಿಯನ್ನು ಈಗಾಗಲೇ ರಚಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಸಮಿತಿಗಳನ್ನು ರಚಿಸಲಾಗಿದೆ. ಅದೇ ರೀತಿ ಕಸ್ತೂರಿ ರಂಗನ್ ವರದಿಯಲ್ಲಿ ಅತಿಸೂಕ್ಷ್ಮ ವಲಯಗಳೆಂದು ನಮೂದಿಸಲಾಗಿರುವ ಗ್ರಾಮಗಳಲ್ಲಿ ಗ್ರಾಮಲೆಕ್ಕಿಗರ ನೇತೃತ್ವದಲ್ಲಿ ತಂಡಗಳನ್ನು ರಚಿಸಬೇಕು. ಈ ತಂಡಗಳಿಗೆ ಆಯಾ ಗ್ರಾಮದ ಜನರು ತಮ್ಮ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದರು.

ಸಮಿತಿಯು ಹಲವಾರು ಶಿಫಾರಸುಗಳನ್ನು ಮಾಡಿದ್ದು, ಈ ಕುರಿತು ಜನರಿಗೆ ಅರಿವು ಮೂಡಿಸುವ ಕಾರ್ಯವನ್ನು ಮಾಡಬೇಕು. ಸಮಿತಿಯ ಕೆಲವು ಶಿಫಾರಸುಗಳು ಇಂತಿವೆ. ಈ ಸೂಕ್ಷ್ಮ ಪ್ರದೇಶಗಳಲ್ಲಿ ವ್ಯಾಪ್ತಿಯಲ್ಲಿ ಕಲ್ಲು ಗಣಿಗಾರಿಕೆ, ಮರಳು ಗಣಿಗಾರಿಕೆ ಸೇರಿದಂತೆ ಎಲ್ಲಾ ರೀತಿಯ ಗಣಿಗಾರಿಕೆ ನಿಷಿದ್ಧ. ಈಗಾಗಲೇ ಗಣಿಗಾರಿಕೆ ನಡೆಸುತ್ತಿದ್ದಲ್ಲಿ ಐದು ವರ್ಷಗಳ ಒಳಗಾಗಿ ಅವುಗಳನ್ನು ಸಂಪೂರ್ಣ ಸ್ಥಗಿತಗೊಳಿಸಬೇಕು. ಯಾವುದೇ ಶಾಖೋತ್ಪನ್ನ ವಿದ್ಯುದಾಗಾರಗಳಿಗೆ ಅವಕಾಶ ಇಲ್ಲ, ಕೆಲವು ಷರತ್ತುಗಳಿಗೆ ಅನುಗುಣವಾಗಿ ಈ ಪ್ರದೇಶದಲ್ಲಿ ಜಲವಿದ್ಯುತ್ ಯೋಜನೆಗಳಿಗೆ ಅವಕಾಶ ನೀಡಬಹುದು. ನದಿ ಕಣಿವೆಯಲ್ಲಿ ಯೋಜನೆಯಿಂದ ಯೋಜನೆಗೆ ಕನಿಷ್ಠ 3 ಕಿ.ಮೀ. ಅಂತರ ಕಾಪಾಡಬೇಕು. ಈ ಪ್ರದೇಶದಲ್ಲಿ ಸ್ಥಾಪನೆಯಾಗುವ ಪವನಶಕ್ತಿ ಯೋಜನೆಗಳನ್ನು ಪರಿಸರ ಪರಿಣಾಮ ಅಂದಾಜು ವ್ಯಾಪ್ತಿಗೆ ತರಬೇಕು. ಪರಿಸರದ ಮೇಲೆ ಭಾರೀ ಪರಿಣಾಮ ಬೀರುವ 'ಕೆಂಪು ಮಾದರಿ' ಕೈಗಾರಿಕೆಗಳ ಸಂಪೂರ್ಣ ನಿಷೇಧ. 'ಕಿತ್ತಳೆ ಮಾದರಿ' ಕೈಗಾರಿಕೆಗಳಿಗೆ ಸಂಪೂರ್ಣ ನಿಷೇಧ ಬೇಡ. ಈ ವ್ಯಾಪ್ತಿಯಲ್ಲಿ 20 ಸಾವಿರ ಚದರ ಕಿ.ಮೀ.ಗಿಂತ ಹೆಚ್ಚು ವಿಸ್ತೀರ್ಣದ ಕಟ್ಟಡಗಳಿಗೆ ಅವಕಾಶ ನೀಡಬಾರದು. ನಗರ ಬಡಾವಣೆ, ಟೌನ್‌ಶಿಪ್ ಯೋಜನೆ ನಿಷೇಧ ಇತ್ಯಾದಿ ಶಿಫಾರಸುಗಳು ಇದ್ದು, ಸಾರ್ವಜನಿಕರು ಈ ಕುರಿತು ತಮ್ಮ ಅಹವಾಲುಗಳನ್ನು ಸಲ್ಲಿಸಬಹುದಾಗಿದೆ ಎಂದು ಅವರು ಹೇಳಿದರು.

ರಾಜ್ಯಮಟ್ಟದ ಸಮಿತಿಯು ನವೆಂಬರ್ 27ರಂದು ಜಿಲ್ಲೆಗೆ ಭೇಟಿ ನೀಡಿ ಸ್ಥಳೀಯವಾಗಿ ಸಾರ್ವಜನಿಕರಿಂದ ಹಾಗೂ ಜನಪ್ರತಿನಿಧಿಗಳಿಂದ ಅಹವಾಲುಗಳನ್ನು ಸ್ವೀಕರಿಸುವ ಸಾಧ್ಯತೆಯಿದೆ.

ಹೆಚ್ಚುವರಿ ಜಿಲ್ಲಾಧಿಕಾರಿ ಎಚ್.ಪ್ರಸನ್ನ, ಕಾರವಾರ ಉಪ ಅರಣ್ಯ ಸಂರಕ್ಷಣಾಧಿಕಾರಿ ಹೀರಾಲಾಲ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.